All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

03.12.2025 6.40 p.m.

***************

ಮುಖ್ಯಾಂಶಗಳು

ರಾಜಭವನ ಇನ್ಮುಂದೆ ಲೋಕಭವನ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅನುಮೋದನೆ

ಮೂಢನಂಬಿಕೆಗಳಿರುವ ಸಮಾಜದ ಜೊತೆ ರಾಜಿಯಾಗದಂತೆ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

ತಮ್ಮ ದೆಹಲಿ ಪ್ರವಾಸಕ್ಕೆ ರಾಜಕೀಯ ಮಹತ್ವವಿಲ್ಲ ; ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ಬೆಳಗಾವಿಯಲ್ಲಿ ಅಗ್ನಿವೀರ ೬ನೇ ತಂಡದ ೪೮೪ ಸೈನಿಕರಿಂದ ನಿರ್ಗಮನ ಪಥ ಸಂಚಲನ

ಉತ್ತರಕನ್ನಡ ಜಿಲ್ಲೆಯ ಕಡಲ ತೀರಗಳಲ್ಲಿ ರಷ್ಯಾ, ಸೈಬೀರಿಯಾ ದೇಶಗಳ ಸಮುದ್ರ ಹಕ್ಕಿಗಳ ಕಲರವ

***************

ಕೇಂದ್ರ ಗೃಹ ಸಚಿವಾಲಯದ ತೀರ್ಮಾನದಂತೆ ದೇಶದಾದ್ಯಂತ ಇರುವ ರಾಜಭವನಗಳ ಹೆಸರನ್ನು ಲೋಕಭವನ ಎಂದು ನಾಮಕರಣ ಮಾಡಲಾಗಿದೆ.

ರಾಜ್ಯದ ರಾಜಭವನವನ್ನು ಲೋಕಭವನ ಎಂದು ಮರು ನಾಮಕರಣಗೊಳಿಸಲಾಗಿದೆ. ಈ ಬಗ್ಗೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿರುವ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ್ ಹೆಸರು ಬದಲಾವಣೆಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅನುಮೋದನೆ ನೀಡಿದ್ದು, ತಕ್ಷಣದಿಂದ ಜಾರಿಗೆ ಬರಲಿದೆ ಎಂದು ತಿಳಿಸಿದ್ದಾರೆ.

ಮುಂದಿನ ದಿನಗಳಲ್ಲಿ ಸರ್ಕಾರದ ಎಲ್ಲ ಇಲಾಖೆಗಳು, ಸರ್ಕಾರಿ ಆದೇಶಗಳು, ಅಧಿಕೃತ ಪತ್ರ ವ್ಯವಹಾರಗಳು, ವೆಬ್‌ಸೈಟ್‌ಗಳು, ಫಲಕಗಳಲ್ಲಿ ರಾಜಭವನ ಕರ್ನಾಟಕ ಬದಲು ಲೋಕಭವನ ಕರ್ನಾಟಕ ಎಂದು ಬಳಸಬೇಕು ಪತ್ರದಲ್ಲಿ ತಿಳಿಸಿದ್ದಾರೆ.

***************

ವಿದ್ಯಾರ್ಥಿಗಳು ಮಾನವೀಯತೆಯನ್ನು ಮೈಗೂಡಿಸಿಕೊಳ್ಳುವುದರ ಜೊತೆಗೆ ಮೂಢನಂಬಿಕೆಗಳಿಂದ ಸಮಾಜದ ಜೊತೆ ರಾಜಿಯಾಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ.

ಮಂಗಳೂರು ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ಫೇಸ್ ಮತ್ತು ಕೃತಕಬುದ್ಧಿಮತ್ತೆ ಉನ್ನತ ಅಧ್ಯಯನ ಕೇಂದ್ರದ ಶಿಲಾನ್ಯಾಸ ಫೇಸ್ ಟ್ರೈಡ್ ಪಾರ್ಕ್ ಮತ್ತು ಫೇಸ್ ಸ್ಪೋರ್ಟ್ಸ್ ಅರೇನಾ ಇದರ ಶಿಲಾನ್ಯಾಸ ಹಾಗೂ ಫೇಸ್  ಕೇರ್ಸ್ ಸಮುದಾಯ ಸೇವಾ ಯೋಜನೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದಲ್ಲಿ ವ್ಯಕ್ತಿಯನ್ನು ಪ್ರೀತಿಸಬೇಕು ಹೊರತು ದ್ವೇಷಿಸಬಾರದು ಎಂದು ತಿಳಿಸಿದ್ದಾರೆ.

ಧ್ವನಿ : ಸಿದ್ದರಾಮಯ್ಯ  (೩೩ ಸೆಕೆಂಡ್‌ಗಳು)

***************

ತಮ್ಮ ದೆಹಲಿ ಪ್ರವಾಸಕ್ಕೆ ರಾಜಕೀಯ ಮಹತ್ವ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತಗಳ್ಳತನ ವಿರುದ್ಧದ ಡಿಸೆಂಬರ್ ೧೪ರ ಪ್ರತಿಭಟನೆಗೆ ತಯಾರಿ ಹಿನ್ನೆಲೆಯಲ್ಲಿ ದೆಹಲಿಗೆ ತೆರಳುತ್ತಿರುವುದಾಗಿ ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಡಿಸೆಂಬರ್ ೮ರ ಸರ್ವಪಕ್ಷ ಸಂಸದರ ಸಭೆಯನ್ನು ತಾಂತ್ರಿಕ ಕಾರಣಗಳಿಂದಾಗಿ ಮುಂದೂಡುವ ಸಾಧ್ಯತೆಗಳಿವೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ತಾವು ಧರಿಸಿದ್ದ ದುಬಾರಿ ಬೆಲೆಯ ವಾಚ್ ಕುರಿತಂತೆ ಪ್ರತಿಕ್ರಿಯಿಸಿದ ಅವರು, ತಮಗಿಷ್ಟದ ವಾಚ್ ಧರಿಸುವ ಹಕ್ಕು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಇದೆ ಎಂದು ಹೇಳಿದ್ದಾರೆ.

***************

ಕಳೆದ ಎರಡೂವರೆ ವರ್ಷಗಳಲ್ಲಿ ಮಂಡ್ಯ ಜಿಲ್ಲೆಗೆ ೧೦ ಸಾವಿರಕ್ಕೂ ಹೆಚ್ಚು ಅನುದಾನವನ್ನು ಜಿಲ್ಲೆಯ ಅಭಿವೃದ್ಧಿಗೆ ನೀಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಲಾಗಿದ್ದ ಜನಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ವಿರೋಧಿಸಿದವರು ಇಂದು ರಾಷ್ಟ್ರಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿದ್ದಾರೆ. ಆದರೆ ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ನೀಡಿದಷ್ಟು ಇನ್ಯಾವುದೇ ರಾಜ್ಯಗಳಲ್ಲಿ ನೀಡಿಲ್ಲ ಎಂದು ಹೇಳಿದ್ದಾರೆ.

ಜಿಲ್ಲೆಯ ರೈತರ ಅಭಿವೃದ್ಧಿಗಾಗಿ ಮಂಡ್ಯ ಜಿಲ್ಲೆಗೆ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯವನ್ನು ತರಲಾಗಿದೆ. ಫಿಲಿಪೈನ್ಸ್ ದೇಶದ ಅಂತಾರಾಷ್ಟ್ರೀಯ ಭತ್ತ ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಿ ನಮ್ಮ ವಾತಾವರಣಕ್ಕೆ ಸರಿಹೊಂದುವ ಹೊಸ ಭತ್ತದ ತಳಿಗಳನ್ನು ಜಿಲ್ಲೆಗೆ ತರಲು ಒಡಂಬಡಿಕೆ ಮಾಡಲಾಗಿದೆ.

ಜಿಲ್ಲೆಯ ರೈತರ ಬೇಡಿಕೆಗೆ ಸ್ಪಂದಿಸಿ ಮುಂದಿನ ಸೋಮವಾರದಿಂದ ಜಿಲ್ಲೆಯಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಮತ್ತು ರಾಗಿ ಖರೀದಿಯನ್ನು ಪ್ರಾರಂಭಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಬೆಳಗಾವಿಯ ಮರಾಠಾ ಲಘು ಪದಾತಿದಳ ೩೧ ವಾರಗಳ ವರೆಗೆ ಕಠಿಣವಾದ ಸೈನಿಕ ತರಬೇತಿ ಪಡೆದ ಅಗ್ನಿವೀರ ೬ನೇ ತಂಡದ ೪೮೪ ಸೈನಿಕರ ನಿರ್ಗಮನ ಪಥ ಸಂಚಲನದ ಸಮಾರಂಭ ಇಂದು ಛತ್ರಪತಿ ಶಿವಾಜಿ ಮೈದಾನದಲ್ಲಿ ಜರುಗಿತು.

ರಾಜ್ಯಗಳ ನೇಮಕಾತಿ ಎಡಿಜಿ ಮೇಜರ್ ಜನರಲ್ ಹರಿ ಭಾಸ್ಕರನ್ ಪಿಳ್ಳೈ ಅಗ್ನಿವೀರ ಸೈನಿಕರ ಪಥ ಸಂಚಲನ ವೀಕ್ಷಿಸಿ, ಗೌರವ ವಂದನೆ ಸ್ವೀಕರಿಸಿದರು.

ಬ್ರಿಗೇಡಿಯರ್ ಜಾಯ್‌ದೀಪ ಮುಖರ್ಜಿ, ಲಘು ಪದಾತಿದಳದ ಹಿರಿಯ ಸೈನಿಕ ಅಧಿಕಾರಿಗಳು, ನಿವೃತ್ತ ಸೈನಿಕರು, ಪೋಷಕರು, ಗಣ್ಯರು, ಎನ್‌ಸಿಸಿ ಕೆಡೆಟ್‌ಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅಗ್ನಿವೀರ ಸೈನಿಕರು ರಾಷ್ಟ್ರಧ್ವಜ, ರೆಜಿಮೆಂಟಲ್ ಧ್ವಜ ಮತ್ತು ಪವಿತ್ರ ಗ್ರಂಥಗಳ ಸಮ್ಮುಖದಲ್ಲಿ ದೃಢೀಕರಣ ಪ್ರಮಾಣವಚನ ಸ್ವೀಕರಿಸಿದರು. ಸೈನಿಕ ತರಬೇತಿಯ ವಿವಿಧ ವಿಭಾಗಗಳಲ್ಲಿ ಉತ್ತಮ ಪ್ರದರ್ಶನ ನೀಡಿದ ಪ್ರತಿಭಾವಂತ ಅಗ್ನಿವೀರರಿಗೆ ಪದಕಗಳನ್ನು ಪ್ರದಾನ ಮಾಡಿ ಗೌರವಿಸಲಾಯಿತು.

***************

ಬೆಳಗಾವಿಯಲ್ಲಿ ಇದೇ ೮ರಿಂದ ನಡೆಯಲಿರುವ ವಿಧಾನಮಂಡಲದ ಚಳಿಗಾಲ ಅಧಿವೇಶನಕ್ಕೆ ಸಂಬಂಧಿಸಿದಂತೆ ರಚಿಸಲಾಗಿರುವ ವಿವಿಧ ಸಮಿತಿ ಹಾಗೂ ಉಪ ಸಮಿತಿಗಳು ತಮಗೆ ನೀಡಲಾಗಿರುವ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸೂಚಿಸಿದ್ದಾರೆ.

ಸುವರ್ಣ ವಿಧಾನ ಸೌಧದಲ್ಲಿ ಇಂದು ಜರುಗಿದ ಚಳಿಗಾಲ ಅಧಿವೇಶನ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಎಲ್ಲ ಸಿದ್ಧತೆಗಳನ್ನು ಪೂರ್ಣಗೊಳಿಸಿ ವಸತಿ, ಊಟೋಪಹಾರ, ಸಾರಿಗೆ ಮತ್ತಿತರ ವ್ಯವಸ್ಥೆಗಳನ್ನು ಖಚಿತಪಡಿಸಿಕೊಂಡು ಯಾವುದೇ ಲೋಪಗಳಿಗೆ ಆಸ್ಪದ ನೀಡದೇ ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ್ದಾರೆ.

ಅಧಿವೇಶನ ಜರುಗುವ ಸಂದರ್ಭದಲ್ಲಿ ಸುವರ್ಣ ವಿಧಾನ ಸೌಧದಲ್ಲಿ ಸಚಿವರು, ಶಾಸಕರು, ಅಧಿಕಾರಿ, ಸಿಬ್ಬಂದಿಗಳಿಗೆ ಪ್ರತ್ಯೇಕ ಊಟದ ಕೌಂಟರಗಳ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದ್ದಾರೆ.

***************

ಚಳಿಗಾಲ ಆರಂಭವಾಗಿದ್ದು, ಕಾರವಾರ, ಅಂಕೋಲಾ ಸೇರಿದಂತೆ ಉತ್ತರಕನ್ನಡ ಜಿಲ್ಲೆಯ ಕರಾವಳಿಯ ಕಡಲ ತೀರಗಳಲ್ಲಿ ಸೀಗಲ್ ಹಕ್ಕಿಗಳ ವಲಸೆ ಹಾಗೂ ಸಮುದ್ರ ಹಕ್ಕಿಗಳ ಕಲರವ ಆರಂಭವಾಗಿದೆ. ಸಾವಿರಾರು ಸಂಖ್ಯೆಯಲ್ಲಿ ಸೀಗಲ್ ಹಕ್ಕಿಗಳು ಕರಾವಳಿಗೆ ವಲಸೆ ಬರುತ್ತಿದೆ.

ವಲಸೆ ಹಕ್ಕಿಗಳ ಆಗಮನ ಕುರಿತು ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡ ಕಡಲಜೀವಶಾಸ್ತ್ರ ಪ್ರೊಫೆಸರ್ ಡಾ.ಶಿವಕುಮಾರ ಹರಗಿ, ಪ್ರತಿವರ್ಷ ಡಿಸೆಂಬರ್, ಜನವರಿ ತಿಂಗಳಲ್ಲಿ ಕಾರವಾರ, ದೇವಬಾಗ್ ಕಡಲ ತೀರ ಹಾಗೂ ಅಂಕೋಲಾದ ಕೇಣಿ ಹಾಗೂ ಬೇಲೆಕೇರಿ ಕಡಲ ತೀರಗಳಲ್ಲಿ ಸೀಗಲ್ ಹಕ್ಕಿಗಳು ವಲಸೆ ಬರುತ್ತವೆ.

ಈ ಹಕ್ಕಿಗಳು ಸಾವಿರಾರು ಕಿಲೋಮೀಟರ್ ದೂರದ ರಷ್ಯಾ, ಸೈಬೀರಿಯಾ ದೇಶಗಳು ಹಾಗೂ ಲಕ್ಷದ್ವೀಪಗಳಿಂದ ಜಿಲ್ಲೆಯ ಕಡಲತೀರಕ್ಕೆ ವಲಸೆ ಬಂದಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಪ್ರೊಫೆಸರ್ ಡಾ.ಶಿವಕುಮಾರ ಹರಗಿ (೩೦ ಸೆಕೆಂಡ್‌ಗಳು)

***************

ಮುಕ್ತ ಪ್ರವೇಶ ಗ್ರಾಹಕರ ಮೇಲೆ ಬೆಸ್ಕಾಂ ಯೋಚಿಸಿರುವ ಹೆಚ್ಚುವರಿ ಶುಲ್ಕವನ್ನು ಎಫ್‌ಕೆಸಿಸಿಐ ವಿರೋಧಿಸಿದೆ. ಬೆಸ್ಕಾಂ ತನ್ನ ಹೆಚ್ಚುವರಿ ಶುಲ್ಕದ ದರವನ್ನು ೧ ರೂಪಾಯಿ ೬೫ ಪೈಸೆಯಿಂದ ೫೮ ಪೈಸೆಗೆ ಏಕಾಏಕಿ ಬದಲಾಯಿಸಿರುವುದು ಪಾರದರ್ಶಕತೆಯ ಕೊರತೆಯನ್ನು ಸೂಚಿಸುತ್ತಿದೆ ಎಂದು ಸ್ಪಷ್ಟಪಡಿಸಿದೆ.

ಹೆಚ್ಚುವರಿ ಶುಲ್ಕದ ಕುರಿತು ರೂಪಿಸಬೇಕಾದ ಸ್ಪಷ್ಟ ನಿಯಾಮಾವಳಿಯನ್ನು ಹೈಕೋರ್ಟ್ ಸೂಚಿಸಿದ್ದರು ಅವು ಇನ್ನು ಜಾರಿಗೆ ಬಂದಿಲ್ಲ ಎಂಬುದನ್ನು ಕೆಇಆರ್‌ಸಿ ಗಮನಕ್ಕೆ ತಂದಿದೆ.

ಬೆಸ್ಕಾಂ ಈ ಸಂಬಂಧ ಯಾವುದೇ ಸಾಕ್ಷಿ ಅಥವಾ ದತ್ತಾಂಶಗಳನ್ನು ಸಲ್ಲಿಸದಿರುವುದರಿಂದ ಈ ಅರ್ಜಿಯನ್ನು ತಿರಸ್ಕರಿಸುವಂತೆ ಎಫ್‌ಕೆಸಿಸಿಐ ಮನವಿ ಮಾಡಿದೆ.

***************

ಚಿಕ್ಕಮಗಳೂರು ನಗರದಲ್ಲಿ ದತ್ತ ಜಯಂತಿ ಅಂಗವಾಗಿ ಬೃಹತ್ ಶೋಭಾಯಾತ್ರೆ ನಡೆಯಿತು. ಕಾಮಧೇನು ಗಣಪತಿ ದೇವಾಲಯದಿಂದ ಆರಂಭಗೊಂಡ

ಶೋಭಾಯಾತ್ರೆಯಲ್ಲಿ ಅನೇಕ ಕಲಾ ತಂಡಗಳು, ದತ್ತ ಮಾಲಾಧಾರಿಗಳು, ವಾದ್ಯಗೊಷ್ಠಿ ತಂಡಗಳು ಭಾಗವಹಿಸಿದ್ದವು. ಸುಮಾರು ೧೫ ಸಾವಿರಕ್ಕು ಹೆಚ್ಚು ಭಕ್ತರು ಪಾಲ್ಗೊಂಡಿದ್ದಾರೆ. ಪರಿಷತ್ ಸದಸ್ಯ ಸಿ.ಟಿ ರವಿ, ಕಾರ್ಕಳ ಶಾಸಕ ಸುನೀಲ್ ಕುಮಾರ್ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದು ಶೊಭಾಯಾತ್ರೆಯುದ್ಧಕ್ಕೂ ಬಿಗಿ ಪೋಲೀಸ್ ಬಂದೋಬಸ್ತ್ ಕಲ್ಪಿಸಲಾಗಿದೆ.

*******ಮುಕ್ತಾಯ*******